# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರವರ ಕಛೇರಿ, ಕೆಂಪೇಗೌಡನಗರ ಉಪವಿಭಾಗ
ಚಿಕ್ಕಪೇಟೆ ವಿಭಾಗ, ಬೆಂಗಳೂರು.

ಸ.ಕಾ.ನಿ.ಅ(ಕೆ.ಗೌ.ನ)/ಪಿ.ಆರ್/486/2021-22. ದಿನಾಂಕ : 23-12-2021

ದಿನಾಂಕ: 18-12-2021 ರಂದು ಈ ಉಪವಿಭಾಗದ ವಾರ್ಡ್ ಸಂಖ್ಯೆ 143ರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಈ ಕೆಳಕಂಡಂತಿರುತ್ತದೆ.

**ಉಪಸ್ಥಿತರು:**

| ಕ್ರ ಸಂ | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಶ್ರೀ. ಉಮಾಶಂಕರ್ | ನೋಡಲ್ ಅಧಿಕಾರಿಗಳು ಹಾಗೂ ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) | 9480684418 |
| 2 | ಶ್ರೀಮತಿ. ಶಿಲ್ಪ.ಎನ್ | ಕಾರ್ಯದರ್ಶಿ ಹಾಗೂ ಕಿರಿಯ ಅಭಿಯಂತರರು ವಾರ್ಡ್ ಸಂಖ್ಯೆ:143 | 9480688143 |
| 3 | ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 8217636732 |
| 4 | ಶ್ರೀ.ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9901066586 |
| 5 | ಎಂ.ಎಂ.ವಿ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448387878 |
| 6 | ಚಿಕ್ಕಣ್ಣ ಗಾರ್ಡನ್ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448508638 |
| 7 | **Annapurna** | ಶಂಕರಪುರಂ ಪೊಲೀಸ್ ಠಾಣೆ | |

ದಿನಾಂಕ: 18-12-2021 ರಂದು ನಡೆದ ವಾರ್ಡ್ -143 ರ ಸಮಿತಿ ಸಭೆಯ ನಡಾವಳಿಗಳು:

ಮಾನ್ಯ ನೋಡಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ರವರ ಅನುಮತಿಯೊಂದಿಗೆ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ಸಭೆಯಲ್ಲಿ ಹಾಜರಿದ್ದ ರೆಸಿಡೆಂಟ್ಸ್ ವೆಲ್‌ಫೇರ್

ಅಸೋಸಿಯೇಷನ್‌ಗಳ ಅಧ್ಯಕ್ಷರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳನ್ನು ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸಲಾಯಿತು.

ಮೊದಲು ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೋಷನ್‌ನ ಶ್ರೀ. ರಾಜು ರವರು ಮಾತನಾಡಿ ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿ ಕೋರಿದರು. ಅವುಗಳೆಂದರೆ ಆರ್.ವಿ. ರಸ್ತೆ ಟೀಚರ್ಸ್ ಕಾಲೇಜ್ ಬಳಿ ಬಸ್ ಶೆಲ್ಟರ್ ಅನ್ನು ನಿರ್ಮಿಸುವುದು.

- ಶ್ರೀರಾಮ ಮಂದಿರ ರಸ್ತೆಯ ಕನ್ಸರ್‌ವೆನ್ಸಿಯಲ್ಲಿ ನಿರ್ಮಿಸಿಕೊಂಡಿರುವ ಹಸುಗಳ ಕೊಟ್ಟಿಗೆಯನ್ನು ತೆರವುಗೊಳಿಸುವುದು.
- ಎಂ.ಎಸ್.ಕೃಷ್ಣರಾವ್ ರಸ್ತೆಯ ಪಾದಚಾರಿ ಮಾರ್ಗದಲ್ಲಿ ವಾರ್ಡ್ ಸಮಿತಿಗೆ ಮೀಸಲಿಟ್ಟಿರುವ 20 ಲಕ್ಷ ರೂಗಳ ಅನುದಾನದಲ್ಲಿ ಬೋಲ್ಲಾರ್ಡ್ಸ್‌ಗಳನ್ನು ಅಳವಡಿಸುವುದು.
- ಸರ್ವೇಯರ್ ರಸ್ತೆಯ ಕನ್ಸರ್‌ವೆನ್ಸಿಯಲ್ಲಿನ ನಾನ್ ವೆಜ್ ಹೋಟೆಲ್‌ನ್ನು ತೆರವುಗೊಳಿಸುವುದು (ಮುಚ್ಚಿಸುವುದು)
- ಸರ್ವೇಯರ್ ರಸ್ತೆಯಲ್ಲಿ ಹಾರ್ಡ್‌ವೇರ್ ಶಾಪ್ ಪ್ರಾರಂಭಿಸುತ್ತಿದ್ದು, ಸದರಿಯವರಿಗೆ ನೋಟೀಸ್ ಜಾರಿ ಮಾಡುವುದು.
- ಕೆ.ಆರ್.ರಸ್ತೆಯ ಪಾದಚಾರಿ ಮಾರ್ಗದಲ್ಲಿರುವ ಗಿಡ ಹಾಗೂ ಹೂವಿನ ಕುಂಡ(ನರ್ಸರಿ)ಗಳ ವ್ಯಾಪಾರವನ್ನು ನಿಲ್ಲಿಸುವುದು.

ಈ ಮೇಲಿನ ಎಲ್ಲಾ ವಿಷಯಗಳ ಬಗ್ಗೆ ಚರ್ಚಿಸಲಾಗಿ ಸಂಬಂಧಪಟ್ಟ ಇಲಾಖೆಗಳಾದ ಟ್ರಾಫಿಕ್ ಇಂಜನಿಯರಿಂಗ್ ಸೆಲ್ (T.V.C.C),ಪಶುಸಂಗೋಪನಾ ಇಲಾಖೆ (Animal Husbandary) ಆರೋಗ್ಯ ವೈದ್ಯಾಧಿಕಾರಿಗಳು (MOH) ಮತ್ತು ವಾರ್ಡಿನ ಅಭಿಯಂತರರಿಗೆ ಮಾನ್ಯ ನೋಡಲ್ ಅಧಿಕಾರಿಗಳು ಸೂಕ್ತ ಕ್ರಮಕೈಗೊಳ್ಳುವಂತೆ ಸೂಚಿಸಿದರು.

ನಂತರ ಎಂ.ಎಂ.ವಿ.ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ .ಅಸೋಸಿಯೋಷನ್‌ನ ಶ್ರೀ.ಎಸ್.ವೆಂಕಟೇಶ್ ರವರು ಮಾತನಾಡಿ ಈ ಕೆಳಕಂಡ ವಿಷಯಗಳ ಬಗ್ಗೆ ಸಭೆಯ ಗಮನಕ್ಕೆ ತಂದು ಸೂಕ್ತ ಕ್ರಮ ವಹಿಸುವಂತೆ ಕೋರಿದರು.

- ಎಂ.ಎಂ.ವಿ ಕ್ರಾಸ್ ರಸ್ತೆಯಲ್ಲಿನ ಗುಂಡಿಗಳನ್ನು ಮುಚ್ಚುವುದು.

- ದಯಾನಗಲ್ ರಸ್ತೆ (Jain College road) ಯಲ್ಲಿನ ಪಾದಚಾರಿ ಮಾರ್ಗವನ್ನು ಸರಿಪಡಿಸುವುದು.
- ಮಿಡಲ್ ಸ್ಕೂಲ್ ರಸ್ತೆಯ ಪಾದಚಾರಿ ಮಾರ್ಗ ಸರಿಪಡಿಸುವುದು.
- ವಾಸವಿ ದೇವಸ್ಥಾನ ರಸ್ತೆ ಜೈ ಶಂಕರ್ ಸ್ವಾಮಿ ಪ್ಯಾಲೇಸ್ ಹತ್ತಿರ ವೈಟ್ ಟಾಪಿಂಗ್ ಕಾಮಗಾರಿ ಸಂಪೂರ್ಣ ಮಾಡುವುದು.
- ವಾಸವಿ ದೇವಸ್ಥಾನ ರಸ್ತೆ ಜೈ ಶಂಕರ್ ಸ್ವಾಮಿ ಪ್ಯಾಲೇಸ್ ಮುಂಭಾಗ ಮರದ ಕೊಂಬೆಗಳನ್ನು ತೆರವುಗೊಳಿಸುವುದು.
- ಎಂ.ಎಂ.ಪಿ.ರಸ್ತೆ ಬಿದ್ದಿರುವ ದೊಡ್ಡ ಮರದ ದಿಮ್ಮಿಯನ್ನು ತೆರವುಗೊಳಿಸುರುವುದು.
- ಎಂ.ಎಂ.ಪಿ.ರಸ್ತೆ ಹಾಗೂ ನ್ಯಾಷನಲ್ ಹೈ ಸ್ಕೂಲ್ ರಸ್ತೆಗಳು ಸೇರುವ ಜಂಕ್ಷನ್‌ನಲ್ಲಿ ರಸ್ತೆ ಉಬ್ಬು ( Road Hump)ನ್ನು ಅಳವಡಿಸುವುದು.

ಈ ಮೇಲಿನ ವಿಷಯಗಳ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿ ಸಂಬಂಧ ಪಟ್ಟ ಇಲಾಖೆಗಳಾದ ವಾರ್ಡ್‌ನ ಕಾಮಗಾರಿ ಇಲಾಖೆ, ರಸ್ತೆ ಮತ್ತು ಮೂಲಭೂತ ಸೌಕರ್ಯ ವಿಭಾಗದ ಇಲಾಖೆ, ತೋಟಗಾರಿಕೆ ಇಲಾಖೆ, ಮತ್ತು . ಟ್ರಾಫಿಕ್ ಇಂಜಿನಿಯರಿಂಗ್ ಸೆಲ್ ವಿಭಾಗದ ಅಧಿಕಾರಿಗಳಿಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಮಾನ್ಯ ನೋಡಲ್ ಅಧಿಕಾರಿಗಳು ಸೂಚಿಸಿದರು.

ಪಾರ್ವತಿ ಪುರಂನ ಶ್ರೀ.ಮಧು ರವರು ಪಾರ್ವತಿ ಪುರಂನಲ್ಲಿ ಬೀದಿ ದೀಪಗಳು ಉರಿಯುತ್ತಿಲ್ಲವೆಂದು ದೂರನ್ನು ಹೇಳಿದರು. ಆಗ ನೋಡಲ್ ಅಧಿಕಾರಿಗಳು ಸಂಬಂಧಪಟ್ಟವರಿಗೆ ತಿಳಿಸಿ ಸರಿಪಡಿಸುವುದಾಗಿ ಹೇಳಿದರು.

ನಂತರ ಕಾರ್ಯದರ್ಶಿಗಳ ವಂದನಾರ್ಪಣೆಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ -143 ವಿ. ವಿ.ಪುರಂ

ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 143 ಹಾಗೂ
ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ)